ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ:https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಒ25521**

**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು 560 009.

**ಸಂಖ್ಯೆ:ಕವಿಪ್ರನಿನಿ/ಬಿ೨ಎ/ಬಿ14/7202/88-89** **ದಿನಾಂಕ:** 28 OCT 2020

## ಸುತ್ತೋಲೆ

**ವಿಷಯ:** ನಿಗಮದ ಸಿಬ್ಬಂದಿಯ ಹಾಜರಾತಿಯ ಬಗ್ಗೆ.

ರಾಜ್ಯಾದ್ಯಂತ ಕೋವಿಡ್-19 ಸಾಂಕ್ರಾಮಿಕ ರೋಗವು ಹರಡುತ್ತಿದ್ದ ಹಿನ್ನೆಲೆಯಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಅಧಿಕಾರಿಗಳ ಮತ್ತು ನೌಕರರ ಆರೋಗ್ಯದ ದೃಷ್ಟಿಯಿಂದ, ಕವಿಪ್ರನಿನಿಯ ಕಛೇರಿಗಳಲ್ಲಿ ಹಾಜರಾತಿ ನಿಯಂತ್ರಣಕ್ಕಾಗಿ ಉಪಯೋಗಿಸುತ್ತಿದ್ದ ಬಯೋಮೆಟ್ರಿಕ್ ಹಾಜರಾತಿ ನಿಯಂತ್ರಣ ವ್ಯವಸ್ಥೆಯನ್ನು ಸ್ಥಗಿತಗೊಳಿಸಲಾಗಿದೆ. ಆದರೆ, ಈ ಸಂಧರ್ಭಗಳಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮತ್ತು ಕಾವೇರಿ ಭವನದ ನಿಗಮದ ಆಡಳಿತ ಕಛೇರಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಹಲವು ಅಧಿಕಾರಿಗಳು ಹಾಗೂ ನೌಕರರು ಕಛೇರಿಗೆ ತಡವಾಗಿ ಹಾಜರಾಗುತ್ತಿರುವುದು ಮತ್ತು ಕೆಲಸದ ವೇಳೆಗಿಂತ ಮುಂಚಿತವಾಗಿ ಕಛೇರಿಯಿಂದ ನಿರ್ಗಮಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ. ಸಿಬ್ಬಂದಿಯ ಈ ರೀತಿಯ ನಡತೆಯಿಂದಾಗಿ ನಿಗಮದ ದಿನನಿತ್ಯದ ಕೆಲಸ ಕಾರ್ಯಗಳಿಗೆ ಧಕ್ಕೆಯುಂಟಾಗುತ್ತಿರುತ್ತದೆ ಮತ್ತು ನಿಗಮದ ಕೆಲಸಗಳ ನಿರ್ವಹಣೆಯಲ್ಲಿ ವಿಳಂಬವಾಗುತ್ತಿರುತ್ತದೆ. ಈ ವಿಷಯವನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದೆ.

ಆದ್ದರಿಂದ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಮತ್ತು ಕಾವೇರಿ ಭವನದ ನಿಗಮದ ಆಡಳಿತ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ನೌಕರರು ಕಾಲ ನಿಷ್ಠೆಯಿಂದ ಕಛೇರಿಗೆ ನಿಗದಿತ ಅವಧಿಯೊಳಗಾಗಿ ಹಾಜರಾಗಲು ಮತ್ತು ಕೆಲಸದ ವೇಳೆಯಲ್ಲಿ ಉಪಸ್ಥಿತರಿದ್ದು, ವಹಿಸಿದ ನಿಗಮದ ಕೆಲಸ ಕಾರ್ಯಗಳನ್ನು ವಿಳಂಬ ಮಾಡದೇ ಶ್ರದ್ಧೆಯಿಂದ ನಿರ್ವಹಿಸಲು ಸೂಚಿಸಿದೆ.

ಕಛೇರಿಯ ಕೆಲಸಕ್ಕೆ ತಡವಾಗಿ ಹಾಜರಾಗುವ, ಕೆಲಸದ ವೇಳೆಗಿಂತ ಮುಂಚಿತವಾಗಿ ಕಛೇರಿಯಿಂದ ನಿರ್ಗಮಿಸುವ ಮತ್ತು ಕೆಲಸದ ವೇಳೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ/ಶಾಖೆಗಳ ತಮ್ಮ ಆಸನಗಳಲ್ಲಿ ಉಪಸ್ಥಿತರಿಲ್ಲದೇ, ಹೊರ ಹೋಗುವ ಅಧಿಕಾರಿಗಳ ಹಾಗೂ ನೌಕರರ ವಿರುದ್ಧ ಸಂಬಂಧಿಸಿದ ಕಛೇರಿಗಳ/ಶಾಖೆಗಳ ಮುಖ್ಯಸ್ಥರು ಸೂಕ್ತ ಶಿಸ್ತು ಕ್ರಮವನ್ನು ತೆಗೆದುಕೊಳ್ಳಲು ಸೂಚಿಸಲಾಗಿದೆ.

'ವ್ಯವಸ್ಥಾಪಕ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ'

23/10/2020

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ.**

**ಪ್ರತಿಗಳು:**

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಮುಖ್ಯ ಇಂಜಿನಿಯರ್(ವಿ)/ ಆರ್ಥಿಕ ಸಲಹೆಗಾರರು, ಕವಿಪ್ರನಿನಿ.
4. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ.) ರವರ ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ **www.kptcl.com-->eprasarana** ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

5 ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ.

6 ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ.

7 ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ.

8 ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಗಳು ಮಾಹಿತಿಗಾಗಿ:**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ. / ಎಸ್ಕಾಂ ಪ.ಜಾ. /ಪ. ಪಂ. ಅಧಿಕಾರಿಗಳ ಸಂಘ, ಬೆಂಗಳೂರು.